ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಲಯ ಯಾದಗಿರಿ.

ಸಿಸಿ ನಂ. **76/2025**

| | | |
|---|---|---|
| ಸಾಕ್ಷಿಯ ಹೆಸರುಃ | ಶೇಖ ಅಬ್ದುಲ ರಜಾಕ್ | ಪ್ರಾಸಾಃ 2 |
| ತಂದೆ/ಗಂಡನ ಹೆಸರುಃ | ಶೇಖ ಚಿತ್ತು | ಚಾಸಾಃ 4 |
| ವಯಸ್ಸು ಃ | 26 ವರ್ಷ | ದಿಃ 22-11-2025 |
| ಉದ್ಯೋಗಃ | ಖಾಸಗಿ ಕೆಲಸ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ಯಾದಗಿರಿ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ

ನನಗೆ ಚಾಸಾಃ 5 ರವರ ಪರಿಚಯ ಇದೆ. ನನಗೆ ಆರೋಪಿತರ ಪರಿಚಯ ಇದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನುಡಿದಿರುವುದಿಲ್ಲ. ಯಾವ ದಿನದಂದು ಏನು ಆಗಿದೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನಮ್ನು ತೋರಿಸಲಾಗಿ ಅದು ಜಪ್ತಿ ಪಂಚನಾಮೆಯಾಗಿದ್ದು ಅದನ್ನು ಸಾಕ್ಷಿಯು ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-2 ಎಂದು, ಸಾಕ್ಷಿಯ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಏನು ಬರೆದಿರುತ್ತಾರೆ ಎಂಬುದರ ಬಗ್ಗೆ ಮಾಹಿತಿ ನನಗೆ ಇಲ್ಲ. ಪೊಟೋವನ್ನು ನಿಪಿ-3 ಎಂದು ಗುರುತಿಸಲಾಯಿತು. ಅದನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸರಕಾರಿ ಸಹಾಯಕ ಅಭಿಯೋಜಕರವರು ಪಾಟಿ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ನ್ಯಾಯಾಲಯದ ಮುಂದೆ ಇರುವ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

ದಿನಾಂಕ 08-08-2023 ರಂದು ನನಗೆ ಮತ್ತು ಚಾಸಾಃ 5 ರವರನ್ನು ಪೋಲಿಸರು ಜಪ್ತಿ ಪಂಚನಾಮೆ ಸಾಕ್ಷಿದಾರಾಗಿ ಕರೆಸಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಸಮಕ್ಷಮದಲ್ಲಿ ನಿಪಿ-2 ರಂತೆ ಗುನ್ನೆಜಾಗೆ ಪಂಚನಾಮೆ ಜರುಗಿಸಿರುತ್ತಾರೆ ಅಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲುಃ ಆರೋಪಿ ಪರ ವಕೀಲರಿಂದ ಇಲ್ಲ

ಮರು ವಿಚಾರಣೆಃ ಇಲ್ಲ

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಲಯ ಯಾದಗಿರಿ.

ಸಿಸಿ ನಂ. **76/2025**

| | | |
|---|---|---|
| ಸಾಕ್ಷಿಯ ಹೆಸರುಃ | ಮುನೀರ್ | ಪ್ರಾಸಾಃ 3 |
| ತಂದೆ/ಗಂಡನ ಹೆಸರುಃ | ಹುಸೇನ | ಚಾಸಾಃ 5 |
| ವಯಸ್ಸು ಃ | 31 ವರ್ಷ | ದಿಃ 22-11-2025 |
| ಉದ್ಯೋಗಃ | ವ್ಯಾಪಾರ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ಯಾದಗಿರಿ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ

ನನಗೆ ಚಾಸಾಃ 4 ರವರ ಪರಿಚಯ ಇಲ್ಲ. ನನಗೆ ಆರೋಪಿತರ ಪರಿಚಯ ಇದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನುಡಿದಿರುವುದಿಲ್ಲ. ಯಾವ ದಿನದಂದು ಏನು ಆಗಿದೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನಮ್ಮ ತೋರಿಸಲಾಗಿ ಅದು ಜಪ್ತಿ ಪಂಚನಾಮೆಯಾಗಿದ್ದು ಅದನ್ನು ಸಾಕ್ಷಿಯು ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-2 ಎಂದು,ಸಾಕ್ಷಿಯು ತನ್ನ ಹೆಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿರುತ್ತಾರೆ. ನಿಪಿ-2 ರಲ್ಲಿ ಏನು ಬರೆದಿರುತ್ತಾರೆ ಎಂಬುದರ ಬಗ್ಗೆ ಮಾಹಿತಿ ನನಗೆ ಇಲ್ಲ. ಫೋಟೋವನ್ನು ನಿಪಿ-3 ಎಂದು ಗುರುತಿಸಲಾಯಿತು. ಅದನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸರಕಾರಿ ಸಹಾಯಕ ಅಭಿಯೋಜಕರವರು ಪಾಟಿ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ನ್ಯಾಯಾಲಯದ ಮುಂದೆ ಇರುವ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

ದಿನಾಂಕ 08-08-2023 ರಂದು ನನಗೆ ಮತ್ತು ಚಾಸಾಃ 5 ರವರನ್ನು ಪೋಲಿಸರು ಜಪ್ತಿ ಪಂಚನಾಮೆ ಸಾಕ್ಷಿದಾರಾಗಿ ಕರೆಸಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಸಮಕ್ಷಮದಲ್ಲಿ ನಿಪಿ-2 ರಂತೆ ಗುನ್ನೆಜಾಗೆ ಪಂಚನಾಮೆ ಜರುಗಿಸಿರುತ್ತಾರೆ ಅಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲುಃ ಆರೋಪಿ ಪರ ವಕೀಲರಿಂದ ಇಲ್ಲ

ಮರು ವಿಚಾರಣೆಃ ಇಲ್ಲ

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಲಯ ಯಾದಗಿರಿ.

ಸಿಸಿ ನಂ. **76/2025**

| | | |
|---|---|---|
| ಸಾಕ್ಷಿಯ ಹೆಸರುಃ | ಸೈಯದ ಅಲಿ | ಪ್ರಾಸಾಃ 1 |
| ತಂದೆ/ಗಂಡನ ಹೆಸರುಃ | ಅಬ್ದುಲ್ ಖಾದರ | ಚಾಸಾಃ 1 |
| ವಯಸ್ಸು ಃ | 47 ವರ್ಷ | ದಿಃ 22-11- 2025 |
| ಉದ್ಯೋಗಃ | ಮುಖ್ಯ ಪೇದೆ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ಯಾದಗಿರಿ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ

ನಾನು 2021 ರಿಂದ ಇಲ್ಲಿಯವರೆಗೆ ಯಾದಗಿರಿ (ಗ್ರಾ) ಪೋಲಿಸ ಠಾಣೆಯಲ್ಲಿ ನಾನು ಮುಖ್ಯ ಪೇದೆ ಎಂದು ಕರ್ತವ್ಯವನ್ನು ನಿರ್ವಹಿಸಿರುತ್ತೇನೆ.

ದಿನಾಂಕ 08-08-2023 ರಂದು ನಾನು ಗುಪ್ತ ಮಾಹಿತಿಯನ್ನು ಪಡೆದುಕೊಳ್ಳಲು ರಾಮಸಮುದ್ರ ಗ್ರಾಮಕ್ಕೆ ಹೋಗಿ ನಂತರ ಆಶನಾಳ ಗ್ರಾಮಕ್ಕೆ ಹೋಗಿ ಅಗಸಿಯಲ್ಲಿ ಕುಳಿತು ಸಾಮಾಜಿಕ ಜಾಲತಾಣಗಳಲ್ಲಿ ಮತಗಳ ನಡುವೆ ಉದ್ರೇಕಿರುವಂತಹ ವಿಡಿಯೋಗಳನ್ನು ಬಿಡಬೇಡಿ ಎಂದು ತಿಳುವಳಿಕೆ ಹೇಳುತ್ತಿರುವಾಗ, ನಾನು ನನ್ನ ಇನಸ್ಟಾಗ್ರಾಮ ತೋರಿಸುತ್ತಿರುವಾಗ ಅದರಲ್ಲಿ ಮೊಹರಂ ಹಬ್ಬದ ಬಗ್ಗೆ "ನಾಳೆ ನಿಮ್ಮ ತಂದೆ-ತಾಯಿ ಸತ್ತರೆ ನಮ್ಮನ್ನು ಕರೆಯವುದು ಮರೆಯಬೇಡಿ ಎಂದು, ನಾವು ಡೋಲು ತಮಾಷೆ ತಂದು ಕುಣಿದು ಕುಪ್ಪಳಿಸುತ್ತೇವೆ" ಎಂದು ಪೋಸ್ಟ ಬಂದಿದ್ದರಿಂದ ನಾನು ಅದರ ಬಗ್ಗೆ ವಿಚಾರ ಮಾಡಿದಾಗ ಅದರ ಐಡಿ ಸೈಯದ ಬಹಾದ್ದೂರ ವಿ18 ಎಂದು ಮೂಲಕ ಬಂದಿರುತ್ತದೆ ಎಂದು ಖಚಿತಪಡಿಸಿ ವಿಚಾರ ಮಾಡಿದಾಗ ಅಕ್ಬರ ಮತ್ತು ಯೂನೂಸ್ ಆರೋಪಿತರು ಇಬ್ಬರೂ ಸೇರಿ ವಿಡಿಯೋ ಮಾಡಿರುತ್ತಾರೆ ಎಂದು ಗೊತ್ತಾಗಿರುತ್ತದೆ. ಸದರಿ ಆರೋಪಿತರನ್ನು ಠಾಣೆಗೆ ಕರೆಯಿಸಿ ಕಾನೂನು ಕ್ರಮಕ್ಕಾಗಿ ಚಾಸಾಃ 9 ರವರ ಮುಂದೆ ಹಾಜರುಪಡಿಸಿರುತ್ತೇನೆ. ಸದರಿ ಮೊಬೈಲ ಹಾಜರುಪಡಿಸಿರುತ್ತೇನೆ. ದೂರನ್ನು ನಿಪಿ-1 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಚಸಾಃ 9 ರವರು ಪಂಚನಾಮೆಯನ್ನು ಮಾಡಿರುತ್ತಾರೆ. ಸಾಕ್ಷಿಯು ಆರೋಪಿತರನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಮೊಬೈಲನ್ನು ನೋಡಿ ನಾನು ಗುರುತಿಸುತ್ತೇನೆ. ಸದರಿ ಮೊಬೈಲನ್ನು ನ್ಯಾಯಾಲಯದ ಮುಂದೆ ಸಂಬಂಧಪಟ್ಟ ಪೊಲಿಸ ಠಾಣೆಯವರು ಹಾಜರುಪಡಿಸಿರುವುದಿಲ್ಲ.

ಪಾಟಿ ಸವಾಲುಃ ಆರೋಪಿ ಪರ ಶ್ರೀ ಎಸ್, ಎಮ್. ಪಿ ವಕೀಲರಿಂದ.

1. ನಾನು ವಾಸವಾಗಿರುವ ಊರು ಯಾದಗಿರಿ. ಸದರಿ ನನ್ನ ಕರ್ತವ್ಯದ ಅವಧಿ ಎಷ್ಟು ಇತ್ತು ಎಂದರೆ ಸಾಕ್ಷಿಯು ಗುಪ್ತ ಮಾಹಿತಿ ಪಡೆಯಲು ಸಮಯ ಇರುವುದಿಲ್ಲ ಎಂದು ನುಡಿಯುತ್ತಾರೆ. ಸದರಿ ಪೊಲಿಸರ ಕರ್ತವ್ಯದ ಅವಧಿ 8 ಗಂಟೆ ಇರುತ್ತದೆ ಎಂದರೆ ಸರಿ. ಗುಪ್ತ ಮಾಹಿತಿ ಪಡೆಯುವಾಗ ಠಾಣೆಯಿಂದ ಹೊರಡಲು ನಮ್ಮ ಠಾಣೆಯ ರಿಜಿಸ್ಟರನಲ್ಲಿ ಬರೆದು ಹೋಗಬೇಕು ಎಂದರೆ ಸರಿ. ಸದರಿ ರಿಜಿಸ್ಟರನಲ್ಲಿ ನಾನು ನಮೂದಿಸಿರುತ್ತೇನೆ. ಸದರಿ ನಾನು ಇನಸ್ಟಾಗ್ರಾಮ ಬಳಸುತ್ತೇನೆ. ಸದರಿ ಆರೋಪಿತರ ಪರಿಚಯ ನನಗೆ ಮೊದಲಿನಿಂದ ಇರುವುದಿಲ್ಲ. ಸದರಿ ಇನಸ್ಟಾಗ್ರಾಮದಲ್ಲಿ ಫ್ರೆಂಡ್ಸ ಇರುವಾಗ ಮಾತ್ರ ವಿಡಿಯೋಗಳು ಬರುತ್ತವೆ ಎಂದರೆ ಸರಿಯಲ್ಲ. ಸದರಿ ಘಟನೆಯ ಪೂರ್ವದಲ್ಲಿ ಆರೋಪಿತರ ಇನಸ್ಟಾಗ್ರಾಮ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ ಸಾಕ್ಷಿಯು ಸಾಮಾಜಿಕ ಜಾಲತಾಣದಲ್ಲಿ ಇಂತಹ ವಿಡಿಯೋಗಳು ಬರುತ್ತವೆ ಎಂದು ನುಡಿಯುತ್ತಾರೆ. ಸದರಿ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹಾಕಿದರೆ ಯಾರು ಹಾಕಿರುತ್ತಾರೆ ಎಂದು ಗೊತ್ತಾಗುವುದಿಲ್ಲ ಎಂದರೆ ಸಾಕ್ಷಿಯು ಐ.ಡಿ ಇರುತ್ತದೆ ಆದ್ದರಿಂದ ಗೊತ್ತಾಗುತ್ತದೆ ಎಂದು ನುಡಿಯುತ್ತಾರೆ.

2. ಸದರಿ ಮೊಬೈಲನಲ್ಲಿ ವಿಡಿಯೋ ಇತ್ತಾ? ಎಂದರೆ ಸಾಕ್ಷಿಯು ಇನಸ್ಟಾಗ್ರಾಮದಲ್ಲಿ ಮಾತ್ರ ಇತ್ತು ಎಂದು ನುಡಿಯುತ್ತಾರೆ. ಸದರಿ ವಿಡಿಯೋ ಯಾರು ಮಾಡಿರುತ್ತಾರೆ ಮತ್ತು ಯಾರು ಅಪಲೋಡ ಮಾಡಿರುತ್ತಾರೆ ಎಂದು ಹೇಳಲು ಬರುವುದಿಲ್ಲ ಎಂದರೆ ಸಾಕ್ಷಿಯು ಆರೋಪಿತರು ಹಾಡುಗಳನ್ನು ಸೆಟ್ ಮಾಡಿರುತ್ತಾರೆ ಎಂದು ನುಡಿಯುತ್ತಾರೆ. ಸದರಿ ವಿಡಿಯೋದಲ್ಲಿ ಆರೋಪಿತರ ಧ್ವನಿ ಇರುತ್ತದೆ. ಸದರಿ ಆರೋಪಿತರ ಧ್ವನಿ ಪ್ರಕರಣದ ಮುಂಚೆ ನನಗೆ ಗೊತ್ತಿರುವುದಿಲ್ಲ. ಸದರಿ ಸಾಮಾಜಿಕ ಜಾಲತಾಣದಲ್ಲಿ ಯಾರ ಧ್ವನಿ ಕೂಡ ತಯಾರು ಮಾಡಲು ಬರುತ್ತದೆ ಎಂದರೆ ಸರಿ.

3. ನನ್ನ ದೂರಿನಲ್ಲಿ ವಿಡಿಯೋ ಯಾರ ಐ.ಡಿ ಯಿಂದ ನೋಡಿರುತ್ತೇನೆ ಎಂದು ಹೇಳಿರುವುದಿಲ್ಲ ಎಂದರೆ ಸರಿ. ಸದರಿ ವಿಡಿಯೋದಲ್ಲಿ ಆರೋಪಿತರು ಆಕ್ಟಿಂಗ್ ಮಾಡಿ ಧ್ವನಿ ಇತ್ತು ಎಂದು ನುಡಿಯುತ್ತಾರೆ. ಸದರಿ ವಿಡಿಯೋದಲ್ಲಿ ಹಾಡು ಇತ್ತು. ಆರೋಪಿತರು ವಿಡಿಯೋ ಮಾಡಿದ್ದರಿಂದ ತೊಂದರೆಯಾಗಿರುತ್ತದೆ ಎಂದು ಯಾರಾದರೂ ದೂರು ಕೊಟ್ಟಿರುತ್ತಾರಾ? ಎಂದರೆ ಸಾಕ್ಷಿಯು ಕೊಟ್ಟಿರುವುದಿಲ್ಲ ಎಂದು ನುಡಿಯುತ್ತಾರೆ. ಸದರಿ ಆರೋಪಿತರು ಯಾವುದೇ ಕೃತ್ಯ ಮಾಡದೇ ಇದ್ದರೂ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಠಾಣೆಯ ಅಂಕಿ-ಸಂಖ್ಯೆಗೋಸ್ಕರ ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಗುಪ್ತ ಮಾಹಿತಿ ಸಲುವಾಗಿ ಹೋಗಿರುತ್ತೇನೆ, ವಿಡಿಯೋ

ನೋಡಿರುತ್ತೇನೆ ಎಂದು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರಿಗೆ ಪೊಲಿಸ ಠಾಣೆಗೆ ಕರೆಸಿರುತ್ತೇವೆ ಎಂದು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ವಿಡಿಯೋ ನಿಖರವಾಗಿ ಯಾವ ದಿನಾಂಕ ಮತ್ತು ಯಾವ ಸವಯದಲ್ಲಿ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ.

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ